ಆಯುಕ್ತರ ಕಛೇರಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ಸರ್ಕಾರ

ನಂ.16-ಡಿ, 3ನೇ ಮಹಡಿ, ದೇವರಾಜ ಅರಸು ಭವನ
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ
ವಸಂತನಗರ, ಬೆಂಗಳೂರು-560 052
ದೂರವಾಣಿ : 080-29505520
ಇ-ಮೇಲ್ : bcwd.hostels@karnataka.gov.in

ಸಂಖ್ಯೆ: ಹಿಂವಕಇ/ವನಿಶಾ-2/ಸಿಆರ್-34/2021-22 ದಿನಾಂಕ: 28.12.2021

ಗೆ,
ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ
ವರ್ಗಗಳ ಕಲ್ಯಾಣಾಧಿಕಾರಿಗಳಿಗೆ.

ಮಾನ್ಯರೆ,

ವಿಷಯ: 2021-22ನೇ ಸಾಲಿಗೆ ಹಿಂದುಳಿದ ವರ್ಗಗಳ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

******

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ 2021-22ನೇ ಸಾಲಿನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವನ್ನು 03.01.2022 ರವರೆಗೆ ವಿಸ್ತರಿಸಲಾಗಿದ್ದು, ಈ ಕುರಿತು ಪ್ರಕಟಣೆಯನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದೆ. ಸದರಿ ಪ್ರಕಟಣೆಯನ್ನು ಜಿಲ್ಲಾಮಟ್ಟದ ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ 3 ದಿನಗಳ ಕಾಲ ಪ್ರಚುರ ಪಡಿಸುವಂತೆ ಹಾಗೂ ಎಲ್ಲಾ ಸರ್ಕಾರದ ಕಛೇರಿಗಳು ಮತ್ತು ಕಾಲೇಜುಗಳ ನಾಮಫಲಕಗಳಲ್ಲಿ ಪ್ರಕಟಿಸಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

ನಿಮ್ಮ ವಿಶ್ವಾಸಿ

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

**2021-22ನೇ ಸಾಲಿನಲ್ಲಿ, ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಕಲ್ಪಿಸಲು ನಿಗದಿಪಡಿಸಿರುವ ಕಾಲಾನುಕ್ರಮಣಿಕೆ**

| ಕ್ರ.ಸಂ | ವಿವರ | ನಿಗದಿಪಡಿಸಿದ ದಿನಾಂಕ |
|---|---|---|
| 1. | ಹೊಸ ವಿದ್ಯಾರ್ಥಿಗಳು ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ, ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: | ದಿ: 20.11.2021 |
| 2. | ಹೊಸ ವಿದ್ಯಾರ್ಥಿಗಳು ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ, ಅರ್ಜಿ ಸಲ್ಲಿಸಲು ವಿಸ್ತರಿಸಿರುವ ದಿನಾಂಕ: | ದಿ: 03.01.2022 |
| 3. | ವಿದ್ಯಾರ್ಥಿ ಸಲ್ಲಿಸುವ ಅರ್ಜಿಯನ್ನು, ವಿದ್ಯಾರ್ಥಿಯು ವ್ಯಾಸಂಗ ಮಾಡುತ್ತಿರುವ ಕಾಲೇಜಿನ ಪ್ರಾಂಶುಪಾಲರಿಂದ ದೃಢೀಕರಿಸಿ, ದಾಖಲೆಗಳೊಂದಿಗೆ, ಸಂಬಂಧಪಟ್ಟ ತಾಲ್ಲೂಕು ಹಿಂದುಳಿದ ವರ್ಗಗಳ ಕಛೇರಿಗೆ ಸಲ್ಲಿಸಲು ಕೊನೆಯ ದಿನಾಂಕ: | ದಿ: 04.01.2022 |
| 4. | ಹೊಸ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು, ಆಯ್ಕೆ ಸಮಿತಿ ಸಭೆಯ ಸೇರುವ ದಿನಾಂಕ: | ದಿ: 05.01.2022 ರಿಂದ ದಿ: 07.01.2022 ರೊಳಗೆ |
| 5. | ಆಯ್ಕೆ ಸಮಿತಿಯ ಪಟ್ಟಿಯನ್ನು ಪ್ರಕಟಿಸುವ ದಿನಾಂಕ: | ದಿ: 07.01.2022 |
| 6. | ಆಯ್ಕೆಯಾದ ವಿದ್ಯಾರ್ಥಿಗಳು, ವಿದ್ಯಾರ್ಥಿ ನಿಲಯಕ್ಕೆ ಪ್ರವೇಶ ಪಡೆಯುವ ಕೊನೆಯ ದಿನಾಂಕ | ದಿ: 07.01.2022 ರಿಂದ ದಿ: 10.01.2022 ರೊಳಗೆ |
| 7. | 2021-22ನೇ ಸಾಲಿನ ಪ್ರವೇಶಾತಿ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಪೂರ್ಣಗೊಳಿಸುವ ದಿನಾಂಕ | ದಿ: 12.01.2022 |

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

**ಕರ್ನಾಟಕ ಸರ್ಕಾರ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಆಯುಕ್ತರ ಕಛೇರಿ, ನಂ.16/-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ**
**ಮಿಲ್ಲರ್ಸ್ ಕೆರೆ ಅಂಗಳ, ವಸಂತ ನಗರ, ಬೆಂಗಳೂರು-52.**

**ಸಂಖ್ಯೆ**-ಹಿಂವಕಇ/ವನಿಶಾ-2/ಸಿಆರ್-34/2021-22 ದಿನಾಂಕ: 28.12.2021

**ಪ್ರಕಟಣೆ**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ**

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2021-22ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, 20.11.2021ಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿದ್ದು, ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ಪೋಷಕರು/ವಿದ್ಯಾರ್ಥಿಗಳು/ಶಿಕ್ಷಣ ಸಂಸ್ಥೆಗಳಿಂದ ಮನವಿಯನ್ನು ಸಲ್ಲಿಸಲಾಗಿದ್ದು, ಪ್ರಯುಕ್ತ ವಿದ್ಯಾರ್ಥಿಗಳ ಅರ್ಜಿ ಸಲ್ಲಿಕೆಯ ದಿನಾಂಕವನ್ನು 03.01.2022 ರವರೆಗೆ ವಿಸ್ತರಿಸಲಾಗಿದೆ.

- ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ-

| | |
|---|---|
| ಪ್ರವರ್ಗ-1, ಎಸ್.ಸಿ & ಎಸ್.ಟಿ | ರೂ.2.50 ಲಕ್ಷ |
| ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ | ರೂ.1.00 ಲಕ್ಷ |

- www.bcwd.karnataka.gov.in ನ್ನು ಸಂಪರ್ಕಿಸಿ ಅರ್ಜಿಯನ್ನು ಸಲ್ಲಿಸಬೇಕು.
- Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕ: 03.01.2022**
- ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ www.bcwd.karnataka.gov.in ನ್ನು ನೋಡಬಹುದು.
- ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd.hostels@karnataka.gov.inಗೆ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು

**ಸಂಪರ್ಕಿಸಬಹುದಾದ ಸಹಾಯವಾಣಿ ಸಂಖ್ಯೆ 8050370006**

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.